# ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ

## ಸಿ.ಸಿ. ನಂ. 1898/25

ಚಾ.ಸಾ. 4

ಪ್ರಾ.ಸಾ. 5

| | | |
|---|---|---|
| ಸಾಕ್ಷಿದಾರರ ಹೆಸರು | – | ಗಿರೀಶ ಹರಿಕಂತ್ರ |
| ತಂದೆಯ ಹೆಸರು | – | ಗಣಪತಿ ಹರಿಕಂತ್ರ |
| ವಯಸ್ಸು | – | 47 ವರ್ಷ |
| ಉದ್ಯೋಗ | – | ಮೀನುಗಾರಿಕೆ |
| ವಾಸ್ತವ್ಯ | – | ಕಾರವಾರ |

(ಇಂದು ದಿನಾಂಕಃ 21-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ಆರೋಪಿತನ ಪರಿಚಯ ಇಲ್ಲ. ಪೊಲೀಸರು ದಾಳಿ ಮಾಡಿದಾಗ ನಾನು ನೋಡಿಲ್ಲ. ಪೊಲೀಸರ ಮುಂದೆ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಮಾನ್ಯ ಹಿರಿಯ ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ದಿನಾಂಕ 11-01-2025 ರಂದು ನನಗೆ ಮೀನು ಹಿಡಿಯುವುದು ಬೆಳಗಿನ ಪಾಳಿ ಇದ್ದುದರಿಂದ ದಿನಾಂಕ 10-01-2025 ರಂದು ಸಂಜೆ ಅಲ್ಲಿಗೆ ಹೊರಟಿದ್ದೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಸುಮಾರು 2.15 ಗಂಟೆ ಸಮಯದಲ್ಲಿ ಆರೋಪಿಯ ಅಂಗಡಿಯ ಹತ್ತಿರ ಪೊಲೀಸರು ಆರೋಪಿಯ ವಶದಲ್ಲಿದ್ದ ಮದ್ಯವನ್ನು ದಾಳಿ ಮಾಡಿ ವಶಕ್ಕೆ ಪಡೆದಿದ್ದಾರೆ ಎಂದರೆ ಸರಿಯಲ್ಲ. ನಾನು ದಾಳಿಯ ಸಮಯದಲ್ಲಿ ಹಾಜರಿದ್ದೆ ಎಂದರೆ ಸರಿಯಲ್ಲ. ದಿನಾಂಕ 11-01-2025 ರಂದು ನಾನು ------------- ತಿಳಿದಿರುತ್ತದೆ ಎಂದು ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ. ಸದರಿ ಹೇಳಿಕೆಯ ಭಾಗವನ್ನು ನಿ.ಪಿ. 8 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅನ್ನುವುದು ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ